ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ; ನ್ಯಾಯಾಲಯ, ಶ್ರೀರಂಗಪಟ್ಟಣ. DW-2

ಸಾಕ್ಷಿಗೆ ಪ್ರಮಾಣ ವಚನ ಮಾಡಲಾದ ದಿಃ05.06.2025

ಪಾಟೀ ಸವಾಲುಃ ವಾದಿ ಪರ ವಕೀಲರಿಂದಃ

ಈ ದಾವೆಯು ಚಾಲ್ತಿಯಲ್ಲಿರುವ ಬಗ್ಗೆ ಯಾರು ತಿಳಿಸಿದರು ಎನ್ನುವ ಪ್ರಶ್ನೆಗೆ ಸಾಕ್ಷಿಯು ನನ್ನ ಚಿಕ್ಕಪ್ಪನಾದ ಮಲ್ಲಿಕಾರ್ಜುನ್ ರವರು ತಿಳಿಸಿರುತ್ತಾರೆ ಎಂದು ನುಡಿಯುತ್ತಾರೆ. ಈ ದಾವೆಯನ್ನು ಭಾಗಕ್ಕಾಗಿ ಸಲ್ಲಿಸಿರುತ್ತಾರೆ. ಸರ್ವೆ ನಂ.147/4 ಆಸ್ತಿಯು ನಮ್ಮ ಕುಟುಂಬಕ್ಕೆ ಸೇರಿದ್ದು ಎನುವ ಬಗ್ಗೆ ದಾಖಲೆಗಳನ್ನು ಹಾಜರು ಪಡಿಸಲು ಯಾವುದಾದರೂ ತೊಂದರೆ ಇದೆಯೇ ಎನ್ನುವ ಪ್ರಶ್ನೆಗೆ ಸಾಕ್ಷಿಯು ತೊಂದರೆ ಇಲ್ಲ ಎಂದು ನುಡಿಯುತ್ತಾರೆ. ಸರ್ವೆ ನಂ.147/4 ಆಸ್ತಿಯು ಮಲ್ಲೇಗೌಡರು ಮತ್ತು ಮಲ್ಲಿಕಾರ್ಜುನ್ ರವರ ಕುಟುಂಬಕ್ಕೆ ಸೇರಿದ ಆಸ್ತಿಯಾಗಿದ್ದು ಸದರಿ ಆಸ್ತಿಗೂ ನನಗೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ಸಾಧ್ಯವಾದರೆ ನಾನು ಹಾಗೂ ಮಲ್ಲಿಕಾರ್ಜುನ್ ರವರು ಆಸ್ತಿಯನ್ನು ಲಪಟಾಯಿಸುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ . ಕೆಂಪೇಗೌಡ ಬಿನ್ ಪೀರೇಗೌಡರವರಿಗೆ ಎಷ್ಟು ಜನ ಮಕ್ಕಳುಗಳು ಎಂದು ನನಗೆ ಅಷ್ಟಾಗಿ ಗೊತ್ತಿರುವುದಿಲ್ಲ. ಕೆಂಪೇಗೌಡರು ತೀರಿಕೊಂಡು ಎಷ್ಟು ವರ್ಷಗಳಾಗಿರುತ್ತದೆ ಎಂದು ನನಗೆ ಗೊತ್ತಿರುವುದಿಲ್ಲ. ಕೆಂಪೇಗೌಡರು ನಾನು ಹುಟ್ಟುವುದಕ್ಕಿಂತ ಮೊದಲೇ ತೀರಿಕೊಂಡಿರುತ್ತಾರೆ. ನನ್ನ ಮುಖ್ಯ ವಿಚಾರಣೆಯಲ್ಲಿ 2 ನೇ ಪ್ಯಾರದಲ್ಲಿ ವಿಚಾರಗಳೆಲ್ಲವೂ ಸುಳ್ಳಿನಿಂದ ಕೂಡಿರುತ್ತದೆ ಎಂದರೆ ಸರಿಯಲ್ಲ.

ಸರ್ವೆ ನಂ.147/4 ಆಸ್ತಿಯ ದಾಖಲೆಗಳನ್ನು ನಾನು ನೋಡಿರುತ್ತೇನೆ. ಈ ದಾವೆಯಲ್ಲಿ ವಾದಿಯರು ಯಾವ ದಾಖಲೆಗಳನ್ನು ಹಾಜರು ಪಡಿಸಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಸರ್ವೆ ನಂ.147/4 ಆಸ್ತಿಯ ಬಗ್ಗೆ ನನಗೆ ಯಾವುದೇ ವಿಚಾರ ಗೊತ್ತಿರುವುದಿಲ್ಲ ಎಂದರೆ ಸರಿಯಲ್ಲ. ಸಾಧ್ಯವಾದರೆ ಮಲ್ಲಿಕಾರ್ಜುನ್ ರವರಿಗೆ ಸಹಾಯ ಮಾಡುವ ಉದ್ದೇಶದಿಂದ ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಸರ್ವೆ ನಂ.147/4 ಆಸ್ತಿಯು ಕೆಂಪೇಗೌಡ ಮತ್ತು ಅವರ ಮಕ್ಕಳುಗಳಿಗೆ ಸೇರಿದ ಆಸ್ತಿಯಾಗಿದ್ದು ಅದಕ್ಕೂ ನಿಮಗೂ ಸಂಬಂಧ ಇರುವುದಿಲ್ಲ ಎನ್ನುವ ಪ್ರಶ್ನೆಗೆ ಸಾಕ್ಷಿಯು ಸರಿಯಲ್ಲ ಎಂದು

ನುಡಿಯುತ್ತಾರೆ. ದಾವಾ ಸ್ವತ್ತುಗಳಲ್ಲಿ ವಾದಿ ಹಾಗೂ ಪ್ರತಿವಾದಿಯರ ನಡುವೆ ಯಾವುದೇ ಭಾಗ ಆಗಿರದೆ ಇರುವ ಕಾರಣ ವಾದಿಯರಿಗೆ ಭಾಗದ ಹಕ್ಕು ಇರುತ್ತದೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ

ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಸಾ.ಓ.ಹೇ.ಸ.ಒ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ., ಶ್ರೀರಂಗಪಟ್ಟಣ.